AUGUST 20,2024
ALL INDIA RADIO- DHARWAD
PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ವಿವೇಕಾದಿತ್ಯ ಕನಿಯಾಲ

<><><>

ಮುಖ್ಯಾಂಶಗಳು:

- ದೊಡ್ಡಬಳ್ಳಾಪುರ – ದಾಬಸ್‌ಪೇಟೆ ಮಧ್ಯೆ, ದೇಶದ ಮೊದಲ, ಕೆ.ಎಚ್.ಐ.ಆರ್. ಸಿಟಿ ಶೀಘ್ರ ಸ್ಥಾಪನೆ – ಸಚಿವ ಎಂ.ಬಿ. ಪಾಟೀಲ.
- ರಾಯಚೂರು ನಗರಸಭೆ ಹಾಗೂ ಮಸ್ಕಿ ಪುರಸಭೆಗೆ, ಪ್ರಧಾನಮಂತ್ರಿ ಸ್ವ–ನಿಧಿ ಯೋಜನೆಯಡಿ, ರಾ ್ಟ್ರ ಪ್ರಶಸ್ತಿಯ ಗರಿ.
- 23 ರಂದು, ಮೊದಲ ರಾಷ್ಟ್ರೀಯ ಅಂತರಿಕ್ಷ ದಿನಾಚರಣೆ; ಬೆಂಗಳೂರಿನ ನೆಹರು ತಾರಾಲಯದಲ್ಲಿ ಅರ್ಥಪೂರ್ಣ ಆಚರಣೆ – ಬಿ.ಆರ್. ಗುರುಪ್ರಸಾದ್.
- ಕಲಬುರಗಿಯಲ್ಲಿ ಇಂದು, 'ರಾಜೀವ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್'ಗೆ ಮುಖ್ಯಮಂತ್ರಿ, ಚಾಲನೆ.

<><><>

ಈಗ ವಾರ್ತೆಗಳ ವಿವರ

<><><>

ದೇಶದ ಮೊದಲ, ಜ್ಞಾನ, ಆರೋಗ್ಯ ಆರೈಕೆ, ಅನ್ವೇಷಣೆ ಹಾಗೂ ಸಂಶೋಧನೆಗೆ ಒತ್ತು ನೀಡುವ – ಕೆ.ಎಚ್.ಐ.ಆರ್. ಸಿಟಿ, ದೊಡ್ಡಬಳ್ಳಾಪುರ – ದಾಬಸ್‌ಪೇಟೆ ಮಧ್ಯೆ 2 ಸಾವಿರ ಎಕರೆ ಪ್ರದೇಶದಲ್ಲಿ, ಶೀಘ್ರ ಸ್ಥಾಪನೆಯಾಗಲಿದೆ ಎಂದು, ಬೃಹತ್ ಕೈಗಾರಿಕಾ ಖಾತೆ ಸಚಿವ ಎಂ.ಬಿ. ಪಾಟೀಲ ತಿಳಿಸಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಈ ವಿಷಯ ಪ್ರಕಟಿಸಿದೆ.

ಜೀವ ವಿಜ್ಞಾನ, ಅಡ್ವಾನ್ಸ್‌ಡ್ ಮ್ಯಾನುಫ್ಯಾಕ್ಚರಿಂಗ್, ಸೆಮಿ ಕಂಡಕ್ಟರ್ ಸೇರಿ, ಆಯ್ದ ವಲಯಗಳಲ್ಲಿ ಜಾಗತಿಕ ಮಟ್ಟದ ಪ್ರತಿಷ್ಠಿತ ವಿಶ್ವ ವಿದ್ಯಾಲಯಗಳು, ಕಂಪೆನಿಗಳ ಕ್ಯಾಂಪಸ್‌ಗಳಿಗೆ ಉದ್ದೇಶಿತ ಕೆ.ಎಚ್.ಐ.ಆರ್. ಸಿಟಿಯಲ್ಲಿ ಅವಕಾಶ ನೀಡಲಾಗುತ್ತಿದೆ.

ರಾಜ್ಯವು ಜಾಗತಿಕ ಮಟ್ಟದಲ್ಲಿ ಪ್ರಮುಖ ಹೂಡಿಕೆ ತಾಣವಾಗಿ ಹೊರಹೊಮ್ಮಬೇಕು ಎಂಬುದು, ಈ ಯೋಜನೆಯ ಆಶಯ ಎಂದು, ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ್ ಪ್ರಕಟಿಸಿದ್ದಾಗಿ, ತಿಳಿಸಿದೆ.

<><><>

ರಾಯಚೂರು ನಗರಸಭೆ ಹಾಗೂ ಮಸ್ಕಿ ಪುರಸಭೆ, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯದ, ಡೇ–ನಲ್ಮ್ ಅಭಿಯಾನದ, ಪ್ರಧಾನಮಂತ್ರಿ ಸ್ವ–ನಿಧಿ ಯೋಜನೆಯಡಿ, ರಾ ್ಟ್ರ ಪ್ರಶಸ್ತಿಗೆ ಭಾಜನವಾಗಿವೆ ಎಂದು, ಜಿಲ್ಲಾ ಕೌಶಲಾಭಿವೃದ್ಧಿ ಅಧಿಕಾರಿ ತಿಳಿಸಿದ್ದಾರೆ.

'ಉತ್ಕೃಷ್ಟತೆಯೆಡೆಗೆ ಇಟ್ಟ ಹೆಜ್ಜೆ; ಸಾಧನೆ ಸಂಭ್ರಮಿಸೋಣ, ಉತ್ಕೃಷ್ಟತೆ ಪ್ರೇರಣಾದಾಯಿ' ಎಂಬ ಧ್ಯೇಯದೊಂದಿಗೆ, ರಾಷ್ಟ್ರ ಮಟ್ಟದಲ್ಲಿ ಆಯ್ಕೆಯಾದ, ನಗರ ಸ್ಥಳೀಯ ಸಂಸ್ಥೆಗಳಿಗೆ, ನಾಡಿದ್ದು ಗುರುವಾರ ಬೆಂಗಳೂರಿನಲ್ಲಿ, ರಾಜ್ಯ ಮಟ್ಟದಲ್ಲಿ ಪುರಸ್ಕರಿಸಲಾಗುತ್ತಿದೆ.

ರಾಯಚೂರು ನಗರ ಸಭೆ ಹಾಗೂ ಮಸ್ಕಿ ಪುರಸಭೆ ಅಧಿಕಾರಿಗಳು, ಪ್ರಶಸ್ತಿ ಸ್ವೀಕರಿಸಲಿದ್ದಾರೆ.

<><><>

ಮುಡಾ ನಿವೇಶನ ವಿವಾದದಲ್ಲಿ, ತಮ್ಮ ವಿರುದ್ಧ ರಾಜ್ಯಪಾಲರು ಪ್ರಕರಣ ದಾಖಲಿಸಲು, ಪ್ರಾಸಿಕ್ಯೂಷನ್‌ಗೆ ನೀಡಿರುವ ಅನುಮತಿಯನ್ನು ಪ್ರಶ್ನಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ರಾಜ್ಯಪಾಲರ ನಿರ್ಣಯವನ್ನು ರದ್ದುಪಡಿಸುವಂತೆ ಅವರು, ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದಾರೆ.

ಈ ಕುರಿತಾದ ಮನವಿಯನ್ನು ತುರ್ತಾಗಿ ಕೈಗೆತ್ತಿಕೊಳ್ಳುವಂತೆ, ನ್ಯಾಯಾಲಯಕ್ಕೆ ತಮ್ಮ ವಕೀಲರ ಮೂಲಕ ಮನವಿ ಮಾಡಿದ್ದಾರೆ.

<><><>

ನ್ಯಾಯಾಲಯದಿಂದ, ಪರಿಹಾರ ಸಿಗುವ ಸಂಪೂರ್ಣ ವಿಶ್ವಾಸವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಈ ಕುರಿತು ಪ್ರಕಟಿಸಿರುವ ಮುಖ್ಯಮಂತ್ರಿ, ರಿಟ್ ಅರ್ಜಿಯಲ್ಲಿ ಮಧ್ಯಂತರ ಪರಿಹಾರವಾಗಿ, ಪ್ರಾಸಿಕ್ಯೂ ನ್‌ಗೆ ತಡೆಯಾಜ್ಞೆ ನೀಡಬೇಕೆಂದು ಕೋರಲಾಗಿದೆ. ಈ ರಿಟ್ ಅರ್ಜಿಯ ಬಗ್ಗೆ ವಕೀಲರಾದ ಅಭಿ ೇಕ್ ಮನು ಸಿಂಗ್ವಿಯವರು ವಾದ ಮಂಡಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಬಿ.ಜೆ.ಪಿ. ಹಾಗೂ ಜೆ.ಡಿ.ಎಸ್. ವಿರುದ್ಧ ಕಾನೂನು ಹಾಗೂ ರಾಜಕೀಯ ಹೋರಾಟ ನಡೆಸುವುದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

<><><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ – 'ಮುಡಾ' ಬಿಡಿ ನಿವೇಶನಗಳ ಹಂಚಿಕೆ ಪ್ರಕರಣದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜಿನಾಮೆಗೆ ಆಗ್ರಹಿಸಿ, ಬಿ.ಜೆ.ಪಿ ಮತ್ತು ಜೆ.ಡಿ.ಎಸ್ ಒಳಗೊಂಡ, ಎನ್.ಡಿ.ಎ. ಮಿತ್ರ ಪಕ್ಷಗಳು, ವಿಧಾನಸೌಧ ಮತ್ತು ವಿಕಾಸಸೌಧದ ನಡುವೆ ಇರುವ ಮಹಾತ್ಮ ಗಾಂಧಿ ಪ್ರತಿಮೆ ಮುಂಭಾಗದಲ್ಲಿ, ಪ್ರತಿಭಟನೆ ನಡೆಸಿದವು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ, ವಿಧಾನ ಪರಿ ತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಜೆ.ಡಿ.ಎಸ್. ಮುಖಂಡ ಟಿ.ಎ. ಸರವಣ ಮತ್ತಿತರ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

<><><>

ಈ ಮಧ್ಯೆ ಆಡಳಿತಾರೂಢ ಕಾಂಗ್ರೆಸ್ ಪಕ್ಷ, ರಾಜ್ಯಾದ್ಯಂತ ಪ್ರತಿಭಟನೆ ನಡೆಸಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂ ನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆಯ ವಿರುದ್ಧ, ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನ ಸೇರಿದಂತೆ, ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಿತು.

ಈ ವೇಳೆ ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜನರಿಂದ ಜನರಿಗಾಗಿ ಜನರಿಗೋಸ್ಕರವೇ ಇರುವ ಸರ್ಕಾರ ನಮ್ಮದು. ಜನಪರ ಕಾರ್ಯಕ್ರಮಗಳನ್ನು ನೀಡುವ ಮೂಲಕ ಜನರಿಗೆ ಹತ್ತಿರವಾಗಿದ್ದೇವೆ. ಪ್ರತಿಪಕ್ಷಗಳು ಇದನ್ನು ಸಹಿಸದೇ, ಮುಖ್ಯಮಂತ್ರಿಗಳ ವಿರುದ್ಧ ಡ್ಯಂತ್ರ ನಡೆಸಿವೆ. ಕಾಂಗ್ರೆಸ್ ಪಕ್ಷದ ಸಚಿವರು, ಶಾಸಕರು, ಮುಖ್ಯಮಂತ್ರಿಯವರ ಬೆಂಬಲಕ್ಕಿದ್ದೇವೆ. ಕಾನೂನು ಮತ್ತು ರಾಜಕೀಯ ಹೋರಾಟವನ್ನು ಮುಂದುವರಿಸಲ್ಲಿದ್ದೇವೆ, ಎಂದರು.

<><><>

ಮೊದಲ ರಾಷ್ಟ್ರೀಯ ಅಂತರಿಕ್ಷ ದಿನಾಚರಣೆ ನಿಮಿತ್ತ, ಬರುವ ಶುಕ್ರವಾರ 23 ರಂದು, ಬೆಂಗಳೂರಿನ ನೆಹರು ತಾರಾಲಯದಲ್ಲಿ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು, ಹಿರಿಯ ಬಾಹ್ಯಾಕಾಶ ವಿಜ್ಞಾನಿ ಹಾಗೂ ನೆಹರು ತಾರಾಲಯದ ನಿರ್ದೇಶಕ, ಡಾಕ್ಟರ್ ಬಿ.ಆರ್. ಗುರುಪ್ರಸಾದ್ ತಿಳಿಸಿದ್ದಾರೆ.

ಆಕಾಶವಾಣಿಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು, ಅಂದು, ಚಂದ್ರಯಾನದ ವಿವಿಧ ಮಾದರಿಗಳನ್ನು ಪ್ರದರ್ಶಿಸಲಾಗುತ್ತಿದೆ. ಯಶಸ್ಸಿನ ಸಾಧನೆಗಳನ್ನು ಪ್ರತಿಬಿಂಬಿಸುವ ಭಿತ್ತಿಚಿತ್ರಗಳನ್ನು ಸಹ ಸಾರ್ವಜನಿಕರು ಗಮನಿಸಬಹುದು ಎಂದರು.

ಬಾಹ್ಯಾಕಾಶ ವಿಜ್ಞಾನದೆಡೆಗೆ, ವಿಶೇ ವಾಗಿ ವಿದ್ಯಾರ್ಥಿಗಳಲ್ಲಿ ಆಸಕ್ತಿ ಅರಳಿಸಲು, ರಸಪ್ರಶ್ನೆ ಕಾರ್ಯಕ್ರಮ, ಆಶು ಭಾ ಣ ಹಾಗೂ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ಅವರು ಹೇಳಿದರು.

<><><>

ರಾಜೀವ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್ ಕಾರ್ಯಕ್ರಮದ ಉದ್ಘಾಟನೆ ಕಲಬುರಗಿಯ, ಪೂಜ್ಯ ದೊಡ್ಡಪ್ಪ ಅಪ್ಪ ಇಂಜಿನೀಯರಿಂಗ್ ಕಾಲೇಜಿನ ಸಭಾಂಗಣದಲ್ಲಿ, ಇಂದು ಬೆಳಗ್ಗೆ 11 ಗಂಟೆಗೆ ಆಯೋಜಿತವಾಗಿದೆ.

ರಾಜ್ಯಸಭೆಯ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಉಪಸ್ಥಿತಿಯಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರು, ಅಧ್ಯಕ್ಷತೆ ವಹಿಸಲಿದ್ದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಪಾಲ್ಗೊಳ್ಳಲಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಭಾರತೀಯ ಕಲೆಗಳ ಉದ್ದೇಶ ಕೇವಲ ಮನೋರಂಜನೆಯಲ್ಲ; ತತ್ವಗಳ ಪ್ರವಹನವಾಗಿದ್ದು, ಕುಟುಂಬ ಹಾಗೂ ಸಮಾಜದಲ್ಲಿ ಸಂಸ್ಕಾರವನ್ನು ಮೈಗೂಡಿಸುತ್ತದೆ ಎಂದು, ಸಂಸ್ಕಾರ ಭಾರತಿ ಅಖಿಲ ಭಾರತೀಯ ಸಂಘಟನಾ ಕಾರ್ಯದರ್ಶಿ ಅಭಿಜೀತ ಗೋಖಲೆ ಹೇಳಿದರು.

ಧಾರವಾಡದ ಜಿ.ಬಿ.ಜೋಶಿ ಮೆಮೋರಿಯಲ್ ಟ್ರಸ್ಟ್ ಆಯೋಜಿಸಿದ್ದ, ಮನೋಹರ ಗ್ರಂಥಮಾಲೆ ಅಟ್ಟದಲ್ಲಿ ಜರುಗಿದ, 'ಭಾರತೀಯ ಕಲೆಗಳು–ಸಂಸ್ಕಾರ' ವಿಷಯದ ಕುರಿತ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂಸ್ಕಾರ ಭಾರತಿ ಉತ್ತರ ಪ್ರಾಂತ ಪ್ರಧಾನ ಕಾರ್ಯದರ್ಶಿ ಡಾಕ್ಟರ್ ಶಶಿಧರ ನರೇಂದ್ರ ಪ್ರದೇಶ ಸಮಾಚಾರಕ್ಕಾಗಿ, ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>

ಡಾಕ್ಟರ್ ಶಶಿಧರ ನರೇಂದ್ರ ಧ್ವನಿ 57 ಸೆಕೆಂದುಗಳು

<><><>

ರಕ್ಷಾ ಬಂಧನ ಹಬ್ಬವನ್ನು, ಶ್ರಾವಣ ಮಾಸದ ಪೌರ್ಣಿಮೆ ಹಿನ್ನೆಲೆ, ದೇಶಾದ್ಯಂತ ನಿನ್ನೆ ಸಂಭ್ರಮದಿಂದ ಆಚರಿಸಲಾಯಿತು.

<><><>

ಸಮಾಜದಲ್ಲಿ ಯಾವುದೇ ಸಮುದಾಯ, ಧರ್ಮದವರು ಇರಲಿ, ನಾವು ಭಾರತೀಯರು ಎಂಬ ಶ್ರೇಷ್ಠ ಭಾವ ಹೊಂದಿದ್ದರೆ, ಸಾಮರಸ್ಯ ಮತ್ತು ಸಹಬಾಳ್ವೆ ಸಾಧ್ಯ ಎಂದು, ಸಂಸ್ಕಾರ ಭಾರತಿಯ, ಅಖಿಲ ಭಾರತ ಸಂಘಟನಾ ಕಾರ್ಯದರ್ಶಿ ಅಭಿಜಿತ್ ಗೋಖಲೆ, ಹೇಳಿದ್ದಾರೆ.

ಹುಬ್ಬಳ್ಳಿಯ ಇಂದಿರಾ ಗಾಜಿನ ಮನೆಯಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘ ಆಯೋಜಿಸಿದ್ದ, ರಕ್ಷಾ ಬಂಧನ ಉತ್ಸವದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು.

ಸಂಘದ ಸ್ವಯಂಸೇವಕರು ಪರಸ್ಪರ ರಾಖಿ ಕಟ್ಟಿಕೊಳ್ಳುವ ಮೂಲಕ ಸಂಭ್ರಮಿಸಿದರು.

<><><>

ಕೀಟಗಳಿಲ್ಲದೇ ಜೀವ ವೈವಿಧ್ಯತೆ ಉಳಿಯಲಾರದು; ಕೀಟಗಳಿಂದ ಅನೇಕ ಔಷಧಿಗಳನ್ನು ತಯಾರಿಸಬಹುದು. ಮಕ್ಕಳಲ್ಲಿ ಕೀಟಗಳ ಬಗ್ಗೆ ತಿಳಿವಳಿಕೆ ಮೂಡಿಸುವ ಅಗತ್ಯವಿದೆ ಎಂದು, ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾಕ್ಟರ್ ಎಸ್.ವಿ.ಸುರೇಶ್ ಹೇಳಿದ್ದಾರೆ.

ಹಾಸನದ ಕಾರೆಕೆರೆ ಕೃಷಿ ಮತ್ತು ಪಶು ವೈದ್ಯಕೀಯ ಮಹಾವಿದ್ಯಾಲಯದ ಆಶ್ರಯದಲ್ಲಿ, ಮೂರು ದಿನಗಳ ಕಾಲ, ಹಾಸನದ ರೆಡ್‌ಕ್ರಾಸ್ ಭವನದಲ್ಲಿ ಏರ್ಪಡಿಸಿರುವ, ವಿಸ್ಮಯ ಕೀಟ ಪ್ರಪಂಚ ಪ್ರದರ್ಶನಕ್ಕೆ, ಚಾಲನೆ ನೀಡಿ ಅವರು ಮಾತನಾಡಿದರು.

ಶಾಲಾ ಮಕ್ಕಳು ವಿಸ್ಮಯ ಕೀಟ ಪ್ರಪಂಚ ಪ್ರದರ್ಶಿನಿ ವೀಕ್ಷಿಸಿದರು.

<><><>

ಬೆಳಗಾವಿ ತಾಲೂಕಿನ ನಾವಗೆ ಗ್ರಾಮದ, ಖಾಸಗಿ ಕಾರ್ಖಾನೆಯಲ್ಲಿ ಸಂಭವಿಸಿದ ಅಗ್ನಿ ದುರಂತದ ಬಗ್ಗೆ, ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯ ಎಸ್.ಕೆ.ವಂಟಿಗೋಡಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದರು.

ಬಳಿಕ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿದ ಅವರು,

ಅವಘಡದಲ್ಲಿ ಮೃತಪಟ್ಟ ಕಾರ್ಮಿಕನ ದೇಹದ ಅವಶೇ ‘ಗಳನ್ನು, ಜಿಲ್ಲಾಡಳಿತ ಗೌರವಪೂರ್ವಕವಾಗಿ ಹಸ್ತಾಂತರಿಸಿರುವ ಕುರಿತು, ಸ್ಪ ್ಟನೆ ನೀಡಿದ್ದು, ಇಂತಹ ಪ್ರಕರಣಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಲು ಅವರು ಸೂಚಿಸಿದರು.

ಕಾರ್ಮಿಕರು ಗಾಯಗೊಂಡಲ್ಲಿ ತಕ್ಷಣವೇ, ಆಸ್ಪತ್ರೆಗೆ ಸೇರಿಸಲು ವಾಹನ ವ್ಯವಸ್ಥೆ ಮತ್ತು ತುರ್ತು ವೈದ್ಯಕೀಯ ಚಿಕಿತ್ಸೆ ಒದಗಿಸಲು, ಮೆಡ್ ಕಿಟ್ ಕಡ್ಡಾಯವಾಗಿ ಇರಬೇಕು. ಕಾರ್ಮಿಕ ಇಲಾಖೆ ಅಧಿಕಾರಿಗಳು ನಿರಂತರ ಪರಿಶೀಲನೆ ನಡೆಸಬೇಕು ಎಂದು ವಂಟಗೋಡಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 25 ಬರುವ ಭಾನುವಾರದಂದು, ಬೆಳಗ್ಗೆ 11 ಗಂಟೆಗೆ, ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. 113ನೇ ಆವೃತ್ತಿಯಾಗಿದೆ.

ಸಾರ್ವಜನಿಕರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು "ಮೈ ಜಿ.ಒ.ವಿ. ಓಪನ್ ಫೋರ್‌ಂ", "ನಮೋ ಆ್ಯಪ್" ಅಥವಾ ಉಚಿತ ಸಹಾಯವಾಣಿ ಸಂಖ್ಯೆ 1800–11–7800 ಮೂಲಕ, ಹಂಚಿಕೊಳ್ಳಬಹುದು.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

ಬ್ರಹ್ಮರ್ಷಿ ನಾರಾಯಣ ಗುರುಗಳು ಹಾಗೂ 48 ಕ್ಕೂ ಹೆಚ್ಚು ವಚನಗಳನ್ನು ನೀಡಿದ ಚೇತನ, ಶರಣ ನುಲಿಯ ಚಂದಯ್ಯನವರ ಜಯಂತಿಯನ್ನು, ಶ್ರದ್ಧಾ ಭಕ್ತಿಯಿಂದ ಜಿಲ್ಲಾಡಳಿತಗಳು ಆಚರಿಸಿದ, ವರದಿಗಳು ಬಂದಿವೆ.

ಮುತ್ಸದ್ದಿ ಡಿ. ದೇವರಾಜ ಅರಸು ಅವರ, 109ನೇ ಜನ್ಮ ದಿನಾಚರಣೆ ಕಾರ್ಯಕ್ರಮ, ಇಂದು, ರಾಜ್ಯಾದ್ಯಂತ ಜರುಗಲಿದೆ.

ಬೆಂಗಳೂರಿನ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಹಾಗೂ ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ, ಧಾರವಾಡ ಜಿಲ್ಲೆಯ ಗಣಿತ ಶಿಕ್ಷಕರಿಗಾಗಿ ಎರಡು ದಿನಗಳ ಕಾರ್ಯಾಗಾರ, ಯಶಸ್ವಿಯಾಗಿ ಜರುಗಿತು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ದೊಡ್ಡಬಳ್ಳಾಪುರ – ದಾಬಸ್‌ಪೇಟೆ ಮಧ್ಯೆ, ದೇಶದ ಮೊದಲ, ಕೆ.ಎಚ್.ಐ.ಆರ್. ಸಿಟಿ ಶೀಘ್ರ ಸ್ಥಾಪನೆ – ಸಚಿವ ಎಂ.ಬಿ. ಪಾಟೀಲ.
- ರಾಯಚೂರು ನಗರಸಭೆ ಹಾಗೂ ಮಸ್ಕಿ ಪುರಸಭೆಗೆ, ಪ್ರಧಾನಮಂತ್ರಿ ಸ್ವ–ನಿಧಿ ಯೋಜನೆಯಡಿ, ರಾಷ್ಟ್ರ ಪ್ರಶಸ್ತಿಯ ಗರಿ.
- 23 ರಂದು, ಮೊದಲ ರಾಷ್ಟ್ರೀಯ ಅಂತರಿಕ್ಷ ದಿನಾಚರಣೆ; ಬೆಂಗಳೂರಿನ ನೆಹರು ತಾರಾಲಯದಲ್ಲಿ ಅರ್ಥಪೂರ್ಣ ಆಚರಣೆ – ಬಿ.ಆರ್. ಗುರುಪ್ರಸಾದ್.
- ಕಲಬುರಗಿಯಲ್ಲಿ ಇಂದು, 'ರಾಜೀವ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್'ಗೆ ಮುಖ್ಯಮಂತ್ರಿ, ಚಾಲನೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>